ಆಯುಕ್ತರ ಕಛೇರಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಕರ್ನಾಟಕ ಸರ್ಕಾರ

ನಂ.16/ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ,
ವಸಂತನಗರ, ಬೆಂಗಳೂರು-52.
ದೂ:080-29505520,
ಇ-ಮೇಲ್:bcwd.scholarship@karnataka.gov.in

ಸಂ:ಹಿಂವಕಇ/ವಿವೇ/ಸಿಆರ್-19/2021-22 ದಿನಾಂಕ: 13.12.2021.

ಗೆ,
ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ
ವರ್ಗಗಳ ಕಲ್ಯಾಣಾಧಿಕಾರಿಗಳಿಗೆ.

ಮಾನ್ಯರೆ,

**ವಿಷಯ:** 2021-22ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ಪ್ರವರ್ಗ-1 ವಿದ್ಯಾರ್ಥಿಗಳಿಂದ, ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2021-22ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು 21.11.2021 ಕ್ಕೆ ನಿಗಧಿಪಡಿಸಲಾಗಿತ್ತು.

ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಿಂದ ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಲು ಮನವಿಯನ್ನು ಮಾಡಿಕೊಂಡಿರುತ್ತಾರೆ. ಆದ ಕಾರಣ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು 31.12.2021 ರವರೆಗೆ ವಿಸ್ತರಿಸಿದೆ. ಈ ಪತ್ರಕ್ಕೆ ಲಗತ್ತಿಸಿರುವ ಪ್ರಕಟಣೆಯನ್ನು ಜಿಲ್ಲಾಮಟ್ಟದ ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ 3 ದಿನಗಳ ಕಾಲ ಪ್ರಚುರ ಪಡಿಸುವಂತೆ ಹಾಗೂ ಎಲ್ಲಾ ಸರ್ಕಾರದ ಕಛೇರಿಗಳು ಮತ್ತು ಕಾಲೇಜುಗಳ ನಾಮಫಲಕಗಳಲ್ಲಿ ಪ್ರಕಟಿಸಲು ಕ್ರಮವಹಿಸುವಂತೆ ಸೂಚಿಸಲಾಗಿದೆ.

ನಿಮ್ಮ ವಿಶ್ವಾಸಿ

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

## ಪ್ರಕಟಣೆ

## ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

| | |
|---|---|
| • ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : | 31-12-2021 |
| • ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ: | www. ssp.karnataka.gov.in/8080/2122 |
| • ಅರ್ಹತೆ : | ಒಂದನೇ ತರಗತಿಯಿಂದ 10 ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹವಿರುತ್ತಾರೆ. |

### ವಿದ್ಯಾರ್ಥಿ ವೇತನ ಸೌಲಭ್ಯದ ವಿವರ

**(E) ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿವೇತನ : (ರೂ.ಗಳಲ್ಲಿ)**

| ತರಗತಿ | ಬಾಲಕ/ಬಾಲಕಿ (10 ತಿಂಗಳಿಗೆ) | ಒಟ್ಟು |
|---|---|---|
| ತರಗತಿ 1 ರಿಂದ 10 | 2000/- | 2000/- |

**(F) ರಾಜ್ಯ ವಿದ್ಯಾರ್ಥಿ ವೇತನ ದರಗಳು : (ರೂ.ಗಳಲ್ಲಿ)**

| ತರಗತಿ | ಬಾಲಕ/ಬಾಲಕಿ (10 ತಿಂಗಳಿಗೆ) | ಅಡ್‌ಹಾಕ್ ಗ್ರಾಂಟ್ | ಒಟ್ಟು |
|---|---|---|---|
| ತರಗತಿ 1 ರಿಂದ 5 | 250/- | 500/- | 750/- |
| ತರಗತಿ 6 ರಿಂದ 8 | 400/- | 500/- | 900/- |
| ತರಗತಿ 9 ರಿಂದ 10 | 500/- | 500/- | 1000/- |

### ಅರ್ಜಿ ಸಲ್ಲಿಸಲು ಅಗತ್ಯವಿರುವ ಮಾಹಿತಿ/ದಾಖಲೆ

- ✓ ಶಾಲೆಯಲ್ಲಿ ಪ್ರವೇಶ ಪಡೆದಿರುವ ಬಗ್ಗೆ ಸ್ಯಾಟ್ಸ್-ಐಡಿ (SATS-ID) (ಸ್ಯಾಟ್ಸ್-ಐಡಿ ತಿಳಿಯಲು ವೆಬ್ ವಿಳಾಸ: http://sts.karnataka.gov.in)
- ✓ ವಿದ್ಯಾರ್ಥಿಯ ಆಧಾರ್ ಸಂಖ್ಯೆ
- ✓ ಪೋಷಕರ ಆಧಾರ್ ಸಂಖ್ಯೆ
- ✓ ಜಾತಿ ಪ್ರಮಾಣ ಪತ್ರದ ಆರ್.ಡಿ. ಸಂಖ್ಯೆ
- ✓ ಆದಾಯ ಪ್ರಮಾಣ ಪತ್ರದ ಆರ್.ಡಿ. ಸಂಖ್ಯೆ
- ✓ ಸರ್ಕಾರಿ ವಿದ್ಯಾರ್ಥಿ ನಿಲಯದಲ್ಲಿ ಪ್ರವೇಶ ಪಡೆದಿದ್ದಲ್ಲಿ, ವಿದ್ಯಾರ್ಥಿ ನಿಲಯ ಪ್ರವೇಶ ಸಂಖ್ಯೆ (ಸಂಬಂಧಿಸಿದ ಇಲಾಖೆಯಿಂದ ಪಡೆದಿದ್ದು)
- ✓ ಹಿಂದಿನ ಸಾಲಿನಲ್ಲಿ ವಿದ್ಯಾರ್ಥಿ ವೇತನ ಪಡೆದಿದ್ದಲ್ಲಿ ಹಿಂದಿನ ಸಾಲಿನ ಅರ್ಜಿ ಸಂಖ್ಯೆ (ಸಂಬಂಧಿಸಿದ ಇಲಾಖೆಯಿಂದ ಪಡೆದಿದ್ದು)
- ✓ ಆಧಾರ್ ಸಂಖ್ಯೆ ಇಲ್ಲದಿದ್ದಲ್ಲಿ, ಆಧಾರ್ ನೋಂದಣಿ ಮಾಡಿಸಿದ ಇ.ಐ.ಡಿ ಸಂಖ್ಯೆ, ಬ್ಯಾಂಕ್ ಖಾತೆ ಸಂಖ್ಯೆ, ಐ.ಎಫ್.ಎಸ್.ಸಿ ಸಂಖ್ಯೆ, ಬ್ಯಾಂಕಿನ ವಿಳಾಸ
- ✓ ಪೋಷಕರ ಆಧಾರ್ ನಂಬರ್‌ಗೆ ಲಿಂಕ್ ಮಾಡಿರುವ ಮೊಬೈಲ್ ನಂ ಹಾಗೂ ಭೌತಿಕ ಅನುಮತಿ ಪತ್ರ

**ಅರ್ಜಿ ಸಲ್ಲಿಸಲು ಬೇಕಾದ ಅರ್ಹತೆಗಳು:**

1. **ಕುಟುಂಬದ ವಾರ್ಷಿಕ ಆದಾಯ ಮಿತಿ :**
   - ➢ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿವೇತನ: ರೂ. 2.00 ಲಕ್ಷ /ವಾರ್ಷಿಕ.
   - ➢ ರಾಜ್ಯ ಸರ್ಕಾರದ ವಿದ್ಯಾರ್ಥಿ ವೇತನ : ರೂ. 1.00 ಲಕ್ಷ/ವಾರ್ಷಿಕ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ಮಾತ್ರ
     ರೂ. 44,500/- ವಾರ್ಷಿಕ ಪ್ರವರ್ಗ-2ಎ, 3ಎ, 3ಬಿ, ಇತರೆ ಹಿಂದುಳಿದ ವರ್ಗಗಳಿಗೆ
2. **ಫಲಾನುಭವಿಯ ಜಾತಿ :**
   - ➢ ರಾಜ್ಯ ಸರ್ಕಾರವು ಅಧಿಸೂಚಿಸಿರುವ ಪ್ರವರ್ಗ-1, 2ಎ, 3ಎ ಮತ್ತು 3ಬಿ ಹಾಗೂ ಕೇಂದ್ರ ಸರ್ಕಾರವು ಅಧಿಸೂಚಿಸಿರುವ ಇತರೆ ಹಿಂದುಳಿದ ವರ್ಗಗಳಡಿ ಬರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಸೌಲಭ್ಯಕ್ಕೆ ಅರ್ಹರಾಗುವುದಿಲ್ಲ.
3. **ಆದಾಯ ಮತ್ತು ಮೆರಿಟ್ ಆಧಾರದಲ್ಲಿ ಮಂಜೂರಾತಿ :**
   - ➢ ಪ್ರವರ್ಗ-1 ಮತ್ತು ಅಲೆಮಾರಿ/ಅರೆಅಲೆಮಾರಿ ಜನಾಂಗಗಳಿಗೆ ಸೇರಿದ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುವುದು.
   - ➢ ತದ ನಂತರ ಇನ್ನುಳಿದ ವಿದ್ಯಾರ್ಥಿಗಳಿಗೆ ಆದಾಯ ಮತ್ತು ಮೆರಿಟ್ ಆಧಾರದ ಮೇಲೆ ರಾಜ್ಯ ವಿದ್ಯಾರ್ಥಿ ವೇತನ ಮಂಜೂರು ಮಾಡಲಾಗುವುದು.

**ಹೆಚ್ಚಿನ ವಿವರಗಳಿಗೆ ಸಂಪರ್ಕಿಸಿ:** ಸಂಬಂಧಪಟ್ಟ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ /ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ/ ***www.backwardclasses.kar.nic.in***

PVaddy
ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

E:\CR NO-19 .2021-22.pre matric add.docx